Lake front

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002.

ಸಂಖ್ಯೆ: BBMP/Addl.Dir/JD NORTH/ LP/ 0175/2013-14 ದಿನಾಂಕ: 23-05-2016.

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಸಂಖ್ಯೆ: 1871/64/1, 64/2, 64/3, 64/4, ಕೈಕೊಂಡ್ರಹಳ್ಳಿ ಗ್ರಾಮ, ವರ್ತೂರು ಹೋಬಳಿ, ವಾರ್ಡ್ ನಂ. 150, ಮಹದೇವಪುರ ವಲಯ, ಬೆಂಗಳೂರು, ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಮತ್ತು ವಾಣಿಜ್ಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD NORTH/ LP/ 0175/2013-14 ದಿನಾಂಕ: 28-08-2013

2) ತಮ್ಮ ಮನವಿ ಪತ್ರ ದಿನಾಂಕ: 18-08-2014 ಮತ್ತು 18-04-2016.

* * * * * * *

ಆಸ್ತಿ ಸಂಖ್ಯೆ: 1871/64/1, 64/2, 64/3, 64/4, ಕೈಕೊಂಡ್ರಹಳ್ಳಿ ಗ್ರಾಮ, ವರ್ತೂರು ಹೋಬಳಿ, ವಾರ್ಡ್ ನಂ. 150, ಮಹದೇವಪುರ ವಲಯ, ಬೆಂಗಳೂರು ಇಲ್ಲಿ 2 ತಳ + ನೆಲ + ಮೇಲಿನ 4 ಅಂತಸ್ತುಗಳ 180 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡ ಮತ್ತು ತಳ + ನೆಲ + ಮೇಲಿನ 2 ಅಂತಸ್ತುಗಳ ವಾಣಿಜ್ಯ ಕಟ್ಟಡ ನಿರ್ಮಿಸಲು ಉಲ್ಲೇಖ (1) ರಂತೆ ಈ ಕಛೇರಿಯಿಂದ ದಿನಾಂಕ: 28-08-2013 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಪ್ರಸ್ತುತ ಸದರಿ ವಸತಿ ಸಮುಚ್ಚಯ ಕಟ್ಟಡ ಮತ್ತು ವಾಣಿಜ್ಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಸದರಿ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ಆರ್.ಸಿ.ಸಿ. ಸ್ಥಂಭಗಳನ್ನು ನಿರ್ಮಿಸಲಾಗಿರುತ್ತದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 21-05-2016 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರದ ಬಾಬ್ತು ಶುಲ್ಕ ರೂ. 13,14,000/- ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: RE-ifms331-TP/000082 ದಿನಾಂಕ: 23-05-2016 ರಂದು ಸಂದಾಯ ಮಾಡಿರುವುದರಿಂದ, ಸದರಿ ವಸತಿ ಸಮುಚ್ಚಯ ಮತ್ತು ವಾಣಿಜ್ಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ನಕ್ಷೆ ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.
4. ವಿವಿಧ ಇಲಾಖೆಗಳಿಂದ ನೀಡಲಾಗಿರುವ ನಿರಾಕ್ಷೇಪಣಾ ಪತ್ರದಲ್ಲಿ ಹಾಗೂ ಅನುಮೋದಿತ ಅಭಿವೃದ್ಧಿ ಯೋಜನಾ ನಕ್ಷೆಯ ಕಾರ್ಯಾದೇಶದಲ್ಲಿ ವಿಧಿಸಿರುವ ಷರತ್ತುಗಳನ್ನು ಪಾಲಿಸುವುದು.

5. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

23/5/16.

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

23/5 23/5 23/5/16

ಗೆ,

Alekhya Property Developments Pvt. Ltd.,
No. 10, Vittal Mallya Road,
Bangalore - 560001.